ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com

ಇ-ಮೇಲ್ ವಿಳಾಸ :director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

ಸಂಖ್ಯೆ: ಕವಿಪ್ರನಿನಿ/ಬಿ4/76/2019-20

ದಿನಾಂಕ : 30 OCT 2019

## ಸುತ್ತೋಲೆ

ವಿಷಯ: ನಿಗಮದ ಅಧಿಕಾರಿ/ನೌಕರರ ಮತ್ತು ಅವರ ಅವಲಂಬಿತರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಪಾವತಿಸುವ ಸಂದರ್ಭದಲ್ಲಿ ಬಿಲ್ಲುಗಳನ್ನು ಅಂಗೀಕರಿಸಲು ಸಲ್ಲಿಸುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ: ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ4/76/2019-20 ದಿನಾಂಕ 19.07.2019

--

ಉಲ್ಲೇಖದಲ್ಲಿನ ನಿಗಮದ ಸುತ್ತೋಲೆ ಸಂಖ್ಯೆ:ಬಿ4/76/2019-20 ದಿನಾಂಕ 19.07.2019 ರಲ್ಲಿ ನಿಗಮದ ಅಧಿಕಾರಿ/ನೌಕರರ ಮತ್ತು ಅವರ ಅವಲಂಬಿತರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ಪಾವತಿಗೆ ಅಂಗೀಕರಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಈಗಾಗಲೇ ಸ್ಪಷ್ಟವಾಗಿ ವಿವರಿಸಲಾಗಿರುತ್ತದೆ.

ಆದಾಗ್ಯೂ, ಸಂಬಂಧಪಟ್ಟ ವೇತನ ಬಟವಾಡೆ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಅಧಿಕಾರಿ/ ನೌಕರರಿಂದ ವೈದ್ಯಕೀಯ ವೆಚ್ಚದ ಮರುಪಾವತಿಗಾಗಿ ಸ್ವೀಕರಿಸಿದ ಬಿಲ್ಲುಗಳನ್ನು ಪರಿಶೀಲಿಸದೇ ಹಾಗೂ ಯಾವುದೇ ಕ್ರಮಗಳನ್ನು ತೆಗೆದುಕೊಳ್ಳದೆ ನೌಕರರಿಂದ ಸ್ವೀಕರಿಸಿದ ಬಿಲ್ಲುಗಳನ್ನು ಯಥಾವತ್ತಾಗಿ ಹಿರಿಯ ವೈದ್ಯಕೀಯ ಸಲಹೆಗಾರರ ಧೃಡೀಕರಣಕ್ಕಾಗಿ ಹಾಗೂ ಅನುಮೋದನೆಗಾಗಿ ನಿಗಮ ಕಾರ್ಯಾಲಯಕ್ಕೆ ಕಳುಹಿಸಿಕೊಡುತ್ತಿರುವುದು ಕಂಡು ಬಂದಿರುತ್ತದೆ. ಹಾಗೂ ಇಂತಹ ಬಿಲ್ಲುಗಳನ್ನು ಹಿರಿಯ ವೈದ್ಯಕೀಯ ಸಲಹೆಗಾರರ ಪರಿಶೀಲನೆಗೆ ಒಳಪಡಿಸಿದಾಗ ಹಲವು ನ್ಯೂನ್ಯತೆಗಳನ್ನು ವೈದ್ಯಾಧಿಕಾರಿಗಳು ವ್ಯಕ್ತಪಡಿಸುತ್ತಿರುವುದರಿಂದ ಬಿಲ್ಲುಗಳನ್ನು ಸರಿಪಡಿಸಲು ಸಂಬಂಧಪಟ್ಟ ವಿಭಾಗ/ವೃತ್ತ/ವಲಯ ಕಛೇರಿಗೆ ಹಿಂದಿರುಗಿಸಲಾಗುತ್ತಿದ್ದು, ಇದರಿಂದ ಅನಾವಶ್ಯಕ ಅಂಚೆ ವೆಚ್ಚ ಹಾಗೂ ಕಾಲ ವಿಳಂಬವಾಗುತ್ತಿರುವುದರ ಜೊತೆಗೆ ನೌಕರರಿಗೂ ಅನಗತ್ಯ ತೊಂದರೆ ಉಂಟಾಗುತ್ತಿರುತ್ತದೆ.

ಆದುದರಿಂದ ನಿಗಮದ ಸುತ್ತೋಲೆ ಸಂಖ್ಯೆ: ಬಿ4/76/2019-20 ದಿನಾಂಕ 19.07.2019 ರಲ್ಲಿ ಈಗಾಗಲೇ ತಿಳಿಸಿರುವ ಕ್ರಮಗಳನ್ನು ಚಾಚೂ ತಪ್ಪದೇ ಪಾಲಿಸಿ, ತದನಂತರ ನಿಗಮ ಕಾರ್ಯಲಯಕ್ಕೆ ಪರಿಶೀಲನೆ ಮತ್ತು ಧೃಡೀಕರಣಕ್ಕಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಇಲ್ಲವಾದಲ್ಲಿ, ಸಂಬಂಧಿಸಿದ ವೇತನ ಬಟವಾಡೆ ಅಧಿಕಾರಿಯನ್ನು ಅನಗತ್ಯ ವಿಳಂಬಗಳಿಗೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

28/10/19

ನಿರ್ದೇಶಕರು (ಆಡಳಿತ ಮತ್ತು ಮಾ.ಸಂ.)
ಕವಿಪ್ರನಿನಿ,

ಪ್ರತಿಗಳು:

1) ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ / ಪಿ.ಸಿ.ಕೆ.ಎಲ್
2) ಎಲ್ಲಾ ನಿರ್ದೇಶಕರು (ಹಣಕಾಸು)/(ಪ್ರಸರಣ)/ (ಆಡಳಿತ ಮತ್ತು ಮಾ.ಸಂ)
3) ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ
4) ಎಲ್ಲಾ ಮುಖ್ಯ ಇಂಜಿನಿಯರ್ (ವಿ), ಕವಿಪ್ರನಿನಿ

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com->eprasarana> ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

5) ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
6) ಎಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್ (ವಿ)/ ಉಪ ಲೆಕ್ಕ ನಿಯಂತ್ರಣಾಧಿಕಾರಿ, ಕವಿಪ್ರನಿನಿ
7) ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
8) ವ್ಯವಸ್ಥಾಪಕ ನಿರ್ದೇಶಕರು/ನಿದೇಶಕರು (ಪ್ರಸರಣ)/(ಹಣಕಾಸು)/(ಆ ಮತ್ತು ಮಾ.ಸಂ) ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಪ್ರತಿಗಳು ಮಾಹಿತಿಗಾಗಿ:

1. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ, ಬೆಂಗಳೂರು ಹಾಗೂ ನಿರ್ದೇಶಕರು, ಕವಿಪ್ರನಿನಿ.ಎಸ್ಕಾಂ.
2. ಶ್ರೀ ಟಿ.ಎಂ.ಶಿವಪ್ರಕಾಶ್,ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ನೌಕರರ ಸಂಘ ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ ಮತ್ತು ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.